# ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಮುಂಡರಗಿ

**ಸಿ.ಸಿ ನಂಃ 521/2022**

| | | |
|---|---|---|
| ಸಾಕ್ಷಿಯ ಹೆಸರುಃ | ಅಬ್ದುಲ್ ಗಫರ್ | ಫ್ರಾಸಾಃ **08** |
| ತಂದೆ/ಗಂಡನ ಹೆಸರುಃ | ಕಾಶೀಂಸಾಬ | ಚಾಸಾಃ **10** |
| ವಯಸ್ಸುಃ | 38 ವರ್ಷ | ದಿಃ **02.07.2026** |
| ಉದ್ಯೋಗಃ | ಚಾಲಕ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಡಂಬಳ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ಚಾಸಾ 1 ಮತ್ತು ಆರೋಪಿತನ ಪರಿಚಯ ಇರುವುದಿಲ್ಲ. ಘಟನೆ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಅಪಘಾತವು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಪೋಲಿಸರ ಮುಂದೆ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿಃ 13.04.2022 ರಂದು ಮಃ 01.30 ರ ಸುಮಾರಿಗೆ ಆರೋಪಿತನು ಕೆ ಎಸ್ ಆರ್ ಟಿ ಸಿ ಬಸ್ ನಂ. ಕೆಎ-26-ಎಫ್-0979 ನ್ನು ಅತೀವೇಗ ಮತ್ತು ಅಲಕ್ಷತನದಿಂದ ಚಲಾಯಿಸಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿ ಬಸ್ಸನ್ನು ಅತೀವೇಗ ಮತ್ತು ಅಲಕ್ಷತನದಿಂದ ಚಲಾಯಿಸಿ ಎದುರುಗಡೆ ಬರುತ್ತಿದ್ದ ಮೋಟರ್ ಸೈಕಲ್ಲಿಗೆ ಡಿಕ್ಕಿ ಪಡಿಸಿರುತ್ತಾನೆ ಎಂದರೆ ಸರಿಯಲ್ಲ. ಡಿಕ್ಕಿ ಪಡಿಸಿದ ಪರಿಣಾಮ ಮೃತ ಅಬ್ದುಲ್ ಕರೀಂಸಾಬನಿಗೆ ತೀವ್ರ ಪೆಟ್ಟಾಗಿ ಉಪಚಾರ ಕಾಲಕ್ಕೆ ಮರಣ ಹೊಂದಿರುತ್ತಾನೆ ಎಂದರೆ ಸರಿಯಲ್ಲ. ಸದರಿ ಅಪಘಾತದಲ್ಲಿ ಚಾಸಾ 12 ರವರಿಗೆ ಕಾಲಿಗೆ ಪೆಟ್ಟಾಗಿ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯನ್ನು ತೋರಿಸಿ ನಿಪಿ

23 ಎಂದು, ಪುರವಣಿ ಹೇಳಿಕೆಯನ್ನು 24 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು   ಆರೋಪಿತರ ಪರಃ   ವಕೀಲರವರಿಂದಃ

ಯಾವುದೇ ಪಾಟೀ ಸವಾಲು ಇರುವುದಿಲ್ಲ.

**ಮರುವಿಚಾರಣೆ ಃ ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

ಜೆಎಂಎಫ್‌ಸಿ ನ್ಯಾಯಾಧೀಶರು
ಮುಂಡರಗಿ